## ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ಮದ್ದೂರು ತಾಲ್ಲೂಕು ಪಂಚಾಯತಿಯಲ್ಲಿ 2003-04ನೇ ಸಾಲಿನ ಆಶ್ರಯ ಯೋಜನೆಯ ಫಲಾನುಭವಿಗಳ ಆಯ್ಕೆಯಲ್ಲಿನ ಅವ್ಯವಹಾರದ ಬಗ್ಗೆ ಜಂಟಿ ಇಲಾಖಾ ವಿಚಾರಣೆ ಜರುಗಿಸಲು ಬದಲಿ ಮಂಡನಾಧಿಕಾರಿಯನ್ನು ನೇಮಕ ಮಾಡುವ ಬಗ್ಗೆ.

**ಓದಲಾಗಿದೆ:** 1. ಸರ್ಕಾರದ ಆದೇಶ ಸಂಖ್ಯೆ:ಗ್ರಾಅಪ/88/ವಿಸೇಬಿ/2007, ದಿನಾಂಕ:29-07-2013.
2. ಮುಕಾನಿಅ ಜಿಪಂ., ಮಂಡ್ಯ ಇವರ ಪತ್ರ ಸಂಖ್ಯೆ: ಉಕಾ-1/ಸಿ-4/ಸಿಸಿಎ/ ಸಿಆರ್44/ 07-08 ದಿನಾಂಕ: 11-11-2013.

------

**ಪ್ರಸ್ತಾವನೆ:**

ಮದ್ದೂರು ತಾಲ್ಲೂಕು ಪಂಚಾಯತಿಯಲ್ಲಿ 2003-04ನೇ ಸಾಲಿನ ಆಶ್ರಯ ವಸತಿ ಯೋಜನೆಯಡಿಯಲ್ಲಿ ಸರ್ಕಾರದ ಮಾರ್ಗಸೂಚಿಗಳನ್ನು ಉಲ್ಲಂಘಿಸಿ, ಕ್ರಿಯಾ ಯೋಜನೆಯಡಿ ಅನುಮೋದನೆಯಾಗದ ಫಲಾನುಭವಿಗಳಿಗೆ ಸರ್ಕಾರದ ಅನುದಾನ ಪಾವತಿಸಿ ಬೃಹತ್ ಮೊತ್ತದ ಆರ್ಥಿಕ ನಷ್ಟ/ಹಣದ ದುರುಪಯೋಗಕ್ಕೆ ಕಾರಣರಾಗಿರುವ ಅಧಿಕಾರಿ/ನೌಕರರ ವಿರುದ್ಧ ಜಂಟಿ ಇಲಾಖೆ ವಿಚಾರಣೆ ಜರುಗಿಸಲು ಸರ್ಕಾರವು ಸಹಾಯಕ ಕಾರ್ಯದರ್ಶಿ, (ಅಭಿವೃದ್ಧಿ) ಜಿಲ್ಲಾ ಪಂಚಾಯತ್, ಮಂಡ್ಯ ಇವರನ್ನು ಮೇಲೆ ಓದಲಾದ ಕ್ರಮ ಸಂಖ್ಯೆ: (1) ರ ಆದೇಶದಲ್ಲಿ ಮಂಡನಾಧಿಕಾರಿಯಾಗಿ ನೇಮಿಸಲಾಗಿತ್ತು.

ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್ ಮಂಡ್ಯ ರವರು, ಮೇಲೆ ಓದಲಾದ ಕ್ರಮ ಸಂಖ್ಯೆ (2) ರ ಪತ್ರದಲ್ಲಿ ಪ್ರಕರಣವು ವಿಚಾರಣಾ ಹಂತದಲ್ಲಿದ್ದು, ಸಹಾಯಕ ಕಾರ್ಯದರ್ಶಿ, (ಅಭಿವೃದ್ಧಿ) ಜಿಲ್ಲಾ ಪಂಚಾಯತ್, ಮಂಡ್ಯ ಇವರು ವೈಯಕ್ತಿಕ ಕಾರಣಗಳಿಂದ ಮತ್ತು ಅನಾನುಭವದಿಂದ ಮಂಡನಾಧಿಕಾರಿಯಾಗಿ ಕೆಲಸ ನಿರ್ವಹಿಸಲು ಸಾಧ್ಯವಾಗುತ್ತಿಲ್ಲವೆಂದು ಮನವಿ ಸಲ್ಲಿಸಿದ್ದು ಜಿಲ್ಲಾ ಪಂಚಾಯತಿಯಲ್ಲಿ ತತ್ಸಂಬಂಧವಾದ ಹುದ್ದೆಯಲ್ಲಿ ಕೆಲಸ ನಿರ್ವಹಿಸುತ್ತಿರುವ ಅಧಿಕಾರಿಗಳು ಪ್ರಸ್ತುತ ಇಲ್ಲದಿರುವುದರಿಂದ ಪ್ರಕರಣವನ್ನು ಶೀಘ್ರ ಇತ್ಯರ್ಥಪಡಿಸ ಬೇಕಾಗಿರುವುದರಿಂದ ಸಹಾಯಕ ಕಾರ್ಯದರ್ಶಿ, (ಅಭಿವೃದ್ಧಿ) ಜಿಲ್ಲಾ ಪಂಚಾಯತ್, ಮಂಡ್ಯ ಇವರ ಬದಲಿಗೆ ಮಂಡನಾಧಿಕಾರಿಯಾಗಿ ಕಾರ್ಯನಿರ್ವಾಹಕ ಅಧಿಕಾರಿ ತಾಲ್ಲೂಕು ಪಂಚಾಯತಿ ಶ್ರೀರಂಗಪಟ್ಟಣ ಇವರನ್ನು ನೇಮಿಸಿ ಆದೇಶ ಹೊರಡಿಸಬೇಕೆಂದು ಕೋರಿರುತ್ತಾರೆ.

ಆದುದರಿಂದ ಈ ಪ್ರಕರಣದ ಇಲಾಖಾ ವಿಚಾರಣೆಗಾಗಿ ಬೇರೊಬ್ಬರು ಮಂಡನಾಧಿಕಾರಿಯಾಗಿ ಕಾರ್ಯನಿರ್ವಾಹಕ ಅಧಿಕಾರಿ ತಾಲ್ಲೂಕು ಪಂಚಾಯತಿ ಶ್ರೀರಂಗಪಟ್ಟಣ ಇವರನ್ನು ನೇಮಿಸುವುದು ಸೂಕ್ತವೆಂದು ಸರ್ಕಾರವು ನಿರ್ಧರಿಸಿ ಈ ಮುಂದಿನಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 88 ವಿಸೇಬಿ 2007 ಬೆಂಗಳೂರು ದಿನಾಂಕ:19-12-2013.**

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳಿಂದ ಮದ್ದೂರು ತಾಲ್ಲೂಕು ಪಂಚಾಯತಿಯಲ್ಲಿ 2003-04ನೇ ಸಾಲಿನ ಆಶ್ರಯ ಯೋಜನೆಯ ಫಲಾನುಭವಿಗಳ ಆಯ್ಕೆಯಲ್ಲಿನ ಅವ್ಯವಹಾರದ ಬಗ್ಗೆ ಜಂಟಿ ಇಲಾಖಾ ವಿಚಾರಣೆ ಜರುಗಿಸಲು ಸಹಾಯಕ ಕಾರ್ಯದರ್ಶಿ, (ಅಭಿವೃದ್ಧಿ)

ಜಿಲ್ಲಾ ಪಂಚಾಯತ್, ಮಂಡ್ಯ ಇವರ ಬದಲಿಗೆ ಕಾರ್ಯನಿರ್ವಾಹಕ ಅಧಿಕಾರಿ ತಾಲ್ಲೂಕು ಪಂಚಾಯತಿ ಶ್ರೀರಂಗಪಟ್ಟಣ ಇವರನ್ನು ಮಂಡನಾಧಿಕಾರಿಯಾಗಿ ನೇಮಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಚಂದ್ರಶೇಖರ್),
ಸರ್ಕಾರದ ಅಧೀನ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.

ಗೆ:

1. ಮಹಾಲೇಖಪಾಲರು, ಕರ್ನಾಟಕ, ಬೆಂಗಳೂರು.
2. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಕೃಷಿ ಇಲಾಖೆ, ಬೆಂಗಳೂರು.
3. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತಿ, ಮಂಡ್ಯ.
4. ಶ್ರೀ ರಾಧಾಕೃಷ್ಣ ಹೊಳ್ಳ, ನಿವೃತ್ತ ಜಿಲ್ಲಾ ನ್ಯಾಯಾಧೀಶರು, ನಂ. 180, ಲಿಂಕ್ ರೋಡ್, ಮಲ್ಲೇಶ್ವರಂ, ಬೆಂಗಳೂರು 560 003. (ವಿಚಾರಣಾಧಿಕಾರಿಗಳು)
6. ಸಹಾಯಕ ಕಾರ್ಯದರ್ಶಿ, (ಅಭಿವೃದ್ಧಿ), ಜಿಲ್ಲಾ ಪಂಚಾಯತಿ, ಮಂಡ್ಯ.
7. ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯತಿ, ಶ್ರೀರಂಗಪಟ್ಟಣ, (ಮಂಡನಾಧಿಕಾರಿ)
8. ಸಂಬಂಧಿಸಿದ ಅಧಿಕಾರಿ/ನೌಕರರುಗಳಿಗೆ (ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತಿ, ಮಂಡ್ಯ ಇವರ ಮುಖಾಂತರ)

ಪ್ರತಿಯನ್ನು:

1. ಸರ್ಕಾರದ ಪ್ರಧಾನ ಕಾರ್ಯದರ್ಶಿ / ಕಾರ್ಯದರ್ಶಿ(ಪಂ.ರಾಜ್)/ಅಪರ ಕಾರ್ಯದರ್ಶಿ (ಆಡಳಿತ), ಗ್ರಾ .ಅ. & ಪಂ.ರಾಜ್ ಇಲಾಖೆ, ಇವರ ಆಪ್ತ ಶಾಖೆಗೆ.
2. ವಿಶೇಷಾಧಿಕಾರಿ, ಗಣಕ ಕೋಶ, ಗ್ರಾ.ಅ.ಪಂ.ರಾಜ್ ಇಲಾಖೆ.
3. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿ.